ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	714
ಸದಸ್ಯರ ಹೆಸರು	:	ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	25/09/2020

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ಕಾರವಾರ ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಪೂರೈಸುತ್ತಿರುವ ಆಹಾರದಲ್ಲಿ ಹುಳಬಿದ್ದ ರಾಗಿ ಹಿಟ್ಟು ಹಾಗೂ ಹೆಸರುಕಾಳುಗಳನ್ನು ಮಕ್ಕಳಿಗೆ ಪೂರೈಸುತ್ತಿದ್ದು, ಇದರಿಂದ ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದು, ಈ ರೀತಿ ತೀರಾ ಕಳಪೆ ಮಟ್ಟದ ಆಹಾರ ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು.)	ಇಲ್ಲ. ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಪೂರೈಸಲಾಗುತ್ತಿದೆ.
ಆ.	ಈ ಸಂಬಂಧ ಅಧಿಕಾರಿಗಳು ಆಕ್ಷೇಪಣೆ ಮಾಡದೇ ಇರುವ ಕುರಿತು ಸರ್ಕಾರ ತನಿಖೆ ಮಾಡುವುದೇ; (ವಿವರ ನೀಡುವುದು.)	ಅನ್ವಯಿಸುವುದಿಲ್ಲ.
ಇ.	ಜಿಲ್ಲೆಯಲ್ಲಿರುವ ಅಂಗನವಾಡಿಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳ ಅಥವಾ ಗುತ್ತಿಗೆದಾರರ ವಿವರಗಳನ್ನು ತಾಲ್ಲೂಕುವಾರು ನೀಡುವುದು;	ಕಾರವಾರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳ ವಿವರ ಈ ಕೆಳಕಂಡತಿವೆ:

ಕ್ರ.ಸ	ತಾಲ್ಲೂಕಿನ ಹೆಸರು	ಸಂಸ್ಥೆ ಹೆಸರು
1	ಅಂಕೋಲಾ	ಎಂ.ಎಸ್.ಪಿ.ಟಿ.ಸಿ ಕುಮಟಾ
2	ಕುಮಟಾ	
3	ಭಟ್ಕಳ	ಎಂ.ಎಸ್.ಪಿ.ಟಿ.ಸಿ ಹೊನ್ನಾವರ
4	ಹೊನ್ನಾವರ	
5	ಕಾರವಾರ	ಎಂ.ಎಸ್.ಪಿ.ಟಿ.ಸಿ ಕಾರವಾರ
6	ಮುಂಡಗೋಡ	
7	ಯಲ್ಲಾಪುರ	
8	ಸಿದ್ದಾಪುರ	ಎಂ.ಎಸ್.ಪಿ.ಟಿ.ಸಿ ಶಿರಸಿ
9	ಶಿರಸಿ	

ಈ.	ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರು ಆಹಾರ ಖರೀದಿಸುತ್ತಿರುವ ಆಹಾರ ಸಾಮಗ್ರಿಗಳ ಬೆಲೆಗೂ ಹಾಗೂ ಅಂದಿನ ಎ.ಪಿ.ಎಂ.ಸಿ. ಮಾರುಕಟ್ಟೆ ಬೆಲೆಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ. ಆಹಾರ ಪದಾರ್ಥಗಳ ಬೆಲೆಗಳನ್ನು ನಿಗದಿಪಡಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು ಆಹಾರ ಪದಾರ್ಥಗಳಿಗೆ ಬೆಲೆಗಳನ್ನು ನಿಗದಿಪಡಿಸುತ್ತಿದೆ.
ಉ.	ಹಾಗಿದ್ದಲ್ಲಿ, ಮಾರುಕಟ್ಟೆ ಜಿಲ್ಲೆಗಿಂತ ಕಡಿಮೆ ದರದಲ್ಲಿ ಕಳಪೆ ಆಹಾರ ಸಾಮಗ್ರಿಗಳನ್ನು ಖರೀದಿಸಿ ಪೂರೈಸುತ್ತಿರುವುದರ ಬಗ್ಗೆ ಸಂಬಂಧಿಸಿದ ತಾಲ್ಲೂಕು ಅಧಿಕಾರಿ ಯಾರ ಗಮನಕ್ಕೆ ತರದೇ ಇರುವುದರಿಂದ ಅವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)	ಅನ್ವಯಿಸುವುದಿಲ್ಲ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ,
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 184 ಐಸಿಡಿ 2020.